# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2022-23ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:-**

1. 2021-22 ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳ ಸಂಪುಟ-5.
2. ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಇವರ ಏಕ ಕಡತ ಸಂಖ್ಯೆ: ಕ್ರಾ.ವೀ.ಸಂ.ರಾ.ಕ್ಷೇ.ಅ.ಪ್ರಾ/ಹೆಚ್ಚುವರಿ/ಸಿ.ಆರ್-15/2022-23
3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: FD 185 BRS 2022, ದಿನಾಂಕ: 01.10.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ (1) ರಲ್ಲಿ 2022-23ನೇ ಸಾಲಿನ ಆಯವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಅನುದಾನವನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆ ನಿರ್ಮಾಣ ಕಾಮಗಾರಿಯನ್ನು ಸಚಿವ ಸಂಪುಟದ ಅನುಮೋದನೆ ಪಡೆದು ರೂ.150.00 ಕೋಟಿಗಳಿಗೆ ಅಂದಾಜು ಪಟ್ಟಿ ತಯಾರಿಸಿ ಟೆಂಡರ್ ಪ್ರಕ್ರಿಯೆ ನಡೆಸಿ ರೂ.179.30ಕೋಟಿಗಳ ಟೆಂಡರ್ ಮೊತ್ತಕ್ಕೆ ಸಚಿವ ಸಂಪುಟ ಅನುಮೋದನೆ ಪಡೆಯಲಾಗಿರುತ್ತದೆ. ಪ್ರಸ್ತುತ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಗೆ ಪ್ರಸಕ್ತ ಸಾಲಿನವರೆಗೂ ರೂ.171.26 ಕೋಟಿಗಳನ್ನು ವೆಚ್ಚ ಮಾಡಲಾಗಿದ್ದು ಸೈನಿಕ ಶಾಲೆಯ ಕಾಮಗಾರಿ ಪ್ರಸ್ತುತ ಮುಕ್ತಾಯ ಹಂತದಲ್ಲಿರುತ್ತದೆ. ಕಾಮಗಾರಿಯ ಟೆಂಡರ್ ಪ್ರೀಮಿಯಂ ಮೊತ್ತ ಶೇ. 21% ರಷ್ಟು ಹೆಚ್ಚಳವಾಗಿದ್ದು (ಅಂದರೆ ಇದರಲ್ಲಿ ಜಿಎಸ್‌ಟಿ 12% ಸೇರಿದಂತೆ) ಒಟ್ಟು ರೂ.31.11ಕೋಟಿಗಳಾಗಿದ್ದು, ಬೆಲೆ ಹೊಂದಾಣಿಕೆ ಮೊತ್ತ ರೂ.20.44 ಕೋಟಿಗಳು ಹಾಗೂ ಇಬಿಆರ್‌ಎಲ್ & ವರ್ಕಸ್ಲಿಪ್‌ನ ನಿವ್ವಳ ವೆಚ್ಚ ರೂ.9.98 ಕೋಟಿಗಳು ಸೇರಿ ಒಟ್ಟಾರೆಯಾಗಿ ಟೆಂಡರ್ ಮೊತ್ತಕ್ಕಿಂತ ರೂ.61.53ಕೋಟಿ ಹೆಚ್ಚುವರಿಯಾಗಿದ್ದು, ದಿನಾಂಕ:07.07.2022 ರಂದು ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಪ್ರಾಧಿಕಾರದ 03 ನೇ ಸಭೆಯ ವಿಷಯ ಸಂಖ್ಯೆ-4ರಲ್ಲಿ ಸೈನಿಕ ಶಾಲೆ ನಿರ್ಮಾಣ ಕಾಮಗಾರಿಯ ಬೆಲೆ ಹೊಂದಾಣಿಕೆ ಮೊತ್ತ ರೂ.20.44 ಕೋಟಿಗಳನ್ನು ಹೊರತುಪಡಿಸಿ ಟೆಂಡರ್ ಪ್ರೀಮಿಯಂ ಮೊತ್ತ ರೂ.31.11ಕೋಟಿ ಮತ್ತು ಇಬಿಆರ್‌ಎಲ್ & ವರ್ಕಸ್ಲಿಪ್‌ನ ನಿವ್ವಳ ವೆಚ್ಚ ರೂ.9.98ಕೋಟಿ ಸೇರಿ ಒಟ್ಟು ರೂ.41.09ಕೋಟಿ ಅನುದಾನ ಬಿಡುಗಡೆಗೆ ಆದೇಶಿಸಿರುತ್ತಾರೆ. ಅದರಂತೆ ಪ್ರಾಧಿಕಾರದ ಲೆಕ್ಕಶೀರ್ಷಿಕೆ:2225-03-190-0-06-059ರಡಿ ರೂ.41.09ಕೋಟಿಗಳ ಹೆಚ್ಚುವರಿ ಅನುದಾನ ಒದಗಿಸುವಂತೆ ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಇವರ ಪ್ರಸ್ತಾವನೆಯಲ್ಲಿ ಕೋರಲಾಗಿರುತ್ತದೆ.

ಮೇಲೆ ಓದಲಾದ (3)ರಲ್ಲಿ 2022-23ನೇ ಸಾಲಿಗೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯ ಕಾಮಗಾರಿಯನ್ನು ಪೂರ್ಣಗೊಳಿಸುವ ಸಲುವಾಗಿ ರೂ.4109.00ಲಕ್ಷಗಳನ್ನು (ರೂಪಾಯಿ ನಾಲ್ಕು ಸಾವಿರದ ನೂರಾ ಒಂಭತ್ತು ಲಕ್ಷಗಳು ಮಾತ್ರ) ಲೆಕ್ಕಶೀರ್ಷಿಕೆ: 2225-03-190-0-06–ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ-059-ಇತರೆ ಖರ್ಚುಗಳಡಿ ಹೆಚ್ಚುವರಿಯಾಗಿ ಒದಗಿಸಿ ಆರ್ಥಿಕ ಇಲಾಖೆಯು ಆದೇಶ ಹೊರಡಿಸಿರುತ್ತದೆ.

2...

07/10/2022

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 508 ಬಿಎಂಎಸ್ 2022**
**ಬೆಂಗಳೂರು, ದಿನಾಂಕ:07.10.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಡಿ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸುವ ಸಲುವಾಗಿ ರೂ.4109.00ಲಕ್ಷಗಳನ್ನು (ರೂಪಾಯಿ ನಾಲ್ಕು ಸಾವಿರದ ನೂರಾ ಒಂಭತ್ತು ಲಕ್ಷಗಳು ಮಾತ್ರ) ಲೆಕ್ಕಶೀರ್ಷಿಕೆ:2225-03-190-0-06–ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ-059-ಇತರೆ ಖರ್ಚುಗಳಡಿ ಹೆಚ್ಚುವರಿಯಾಗಿ ಈ ಕೆಳಕಂಡ ಷರತ್ತಿಗೊಳಪಟ್ಟು ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:**

1. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರರವರು ಹಣವನ್ನು ಡ್ರಾ ಮಾಡಲು ಸಲ್ಲಿಸುವ ಸ್ವೀಕರ್ತನ ರಶೀದಿ ಬಿಲ್ಲುಗಳಿಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮೇಲು ರುಜು ಪಡೆದು ಹಣ ಡ್ರಾ ಮಾಡತಕ್ಕದ್ದು.
2. ಅನುದಾನ ಬಳಕೆಗೆ ಸಂಬಂಧಿಸಿದಂತೆ ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾದಿಕಾರ ನಿಯಮಾನುಸಾರ ಮೇಲುಸ್ತುವಾರಿ ನಡೆಸುವುದು ಹಾಗೂ ಯಾವುದೇ ರೀತಿಯ ಅನುದಾನ ದುರ್ಬಳಕೆ ಆಗದಂತೆ ಕ್ರಮ ವಹಿಸುವುದು.
3. ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಬಳಸುವುದು. ಬೇರೆ ಯಾವುದೇ ಉದ್ದೇಶಕ್ಕೆ ಬಳಸಬಾರದು.
4. ಸದರಿ ಕಾಮಗಾರಿಯನ್ನು ಒದಗಿಸಿರುವ ಮೊತ್ತದಲ್ಲಿ ಮುಕ್ತಾಯಗೊಳಿಸತಕ್ಕದ್ದು, ಹೆಚ್ಚುವರಿ ಅನುದಾನ ಕೋರಿಕೆಗೆ ಮರು ಪ್ರಸ್ತಾವನೆ ಸಲ್ಲಿಸುವಂತಿಲ್ಲ.
5. ಕೆ.ಟಿ.ಪಿ.ಪಿ. ಕಾಯ್ದೆಯನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಟಿಪ್ಪಣಿ ಸಂಖ್ಯೆ:ಆಇ 270 ವೆಚ್ಚ-3/2022, ದಿನಾಂಕ:06.10.2022ರಡಿ ನೀಡಿರುವ ಸಹಮತಿಯನ್ವಯ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 185 ಬಿಆರ್‌ಎಸ್ 2022, ದಿನಾಂಕ:01.10.2022 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ
Shaheenparveen 07/10/2022
**(ಷಾಹೀನ್ ಪರ್ವೀನ್ .ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.

2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಆಯುಕ್ತರು,ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಪ್ರಾಧಿಕಾರ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ಗಣಕ ಶಾಖೆ), ಬೆಂಗಳೂರು.
6. ಖಜನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ ಇಲಾಖೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು,ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು,ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********